# ಕರ್ನಾಟಕ ವಿಧಾನ ಪರಿಷತ್ತು

ಲಘು ಪ್ರಕಟಣೆ ಭಾಗ-2

(ಸಾಂಸದಿಕ ಹಾಗೂ ಇತರೆ ವಿಷಯಗಳಿಗೆ ಸಂಬಂಧಿಸಿದ ಸಾಮಾನ್ಯ ಮಾಹಿತಿ)

ಗುರುವಾರ, 06ನೇ ಆಗಸ್ಟ್ 2026

ಸಂಖ್ಯೆ:27/2026

ಕರ್ನಾಟಕ ವಿಧಾನ ಪರಿಷತ್ತಿಗೆ ಚಿಕ್ಕಮಗಳೂರು ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ನಡೆದ ಚುನಾವಣೆಯಲ್ಲಿ ಕರ್ನಾಟಕ ರಾಜ್ಯಪತ್ರದ ಅಧಿಸೂಚನೆ ಸಂಖ್ಯೆ: DPAR15CHUVIPA2021, BENGALURU, DATED:06.01.2022ರ ರೀತ್ಯಾ ಚುನಾಯಿತರಾದ ಶ್ರೀ ಎಂ.ಕೆ. ಪ್ರಾಣೇಶ್‌ರವರ ಆಯ್ಕೆಯನ್ನು ಪ್ರಶ್ನಿಸಿ ಶ್ರೀಮತಿ ಎ.ವಿ. ಗಾಯತ್ರಿ ಶಾಂತೇಗೌಡರವರು ಮಾನ್ಯ ಉಚ್ಛ ನ್ಯಾಯಾಲಯದಲ್ಲಿ ಹೂಡಿರುವ ಚುನಾವಣೆ ತಕರಾರು ಅರ್ಜಿ ಸಂಖ್ಯೆ:1/2022, 2/2022 ಮತ್ತು 3/2022 ಗಳ ವಿಷಯದಲ್ಲಿ ಶ್ರೀ ಎಂ.ಕೆ. ಪ್ರಾಣೇಶ್ ಇವರ ಆಯ್ಕೆಯನ್ನು ಅಸಿಂಧುಗೊಳಿಸಿರುವ ಕುರಿತು ಮಾನ್ಯ ಸರ್ವೋಚ್ಚ ನ್ಯಾಯಾಲಯದಲ್ಲಿ ಸಲ್ಲಿಸಿರುವ ಮೇಲ್ಮನವಿ ಸಂಖ್ಯೆ:9032-9034/2026ರಲ್ಲಿ ಮಾನ್ಯ ಉಚ್ಛನ್ಯಾಯಾಲಯದ ತೀರ್ಪನ್ನು ಎತ್ತಿಹಿಡಿಯುವ ಮೂಲಕ ದಿನಾಂಕ:16.07.2026ರಂದು ಮೇಲ್ಮನವಿಯ ಅರ್ಜಿಯು ವಜಾಗೊಂಡಿರುತ್ತದೆ. ಶ್ರೀಮತಿ ಎ.ವಿ. ಗಾಯತ್ರಿ ಶಾಂತೇಗೌಡ ಅವರು 12-ಚಿಕ್ಕಮಗಳೂರು ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಕರ್ನಾಟಕ ವಿಧಾನ ಪರಿಷತ್ತಿಗೆ ಚುನಾಯಿತರಾಗಿರುತ್ತಾರೆಂದು ಕರ್ನಾಟಕ ರಾಜ್ಯಪತ್ರ ಸಂಖ್ಯೆ:DPAR06CHUTHAA2025, BENGALURU, DATED:05.08.2026ರ ಮೂಲಕ ಪ್ರಕಟಿಸಲಾಗಿದೆ.

ಶ್ರೀ ಎಂ.ಕೆ. ಪ್ರಾಣೇಶರವರು ಸನ್ಮಾನ್ಯ ಸಭಾಪತಿಯವರಿಗೆ ವಿಳಾಸಿಸಿ ದಿನಾಂಕ: 01.08.2026ರಂದು ವಿಧಾನ ಪರಿಷತ್ತಿನ ಶಾಸಕ ಸ್ಥಾನಕ್ಕೆ ರಾಜೀನಾಮೆಯನ್ನು ಸಲ್ಲಿಸಿರುತ್ತಾರೆ.

ಶ್ರೀ ಎಂ.ಕೆ. ಪ್ರಾಣೇಶ್‌ರವರ ವಿಧಾನ ಪರಿಷತ್ತಿನ ಶಾಸಕತ್ವದ ಅವಧಿಯು ಮಾನ್ಯ ಸರ್ವೋಚ್ಚ ನ್ಯಾಯಾಲಯವು ನೀಡಿರುವ ತೀರ್ಪಿನ ದಿನಾಂಕದಿಂದ ಕೊನೆಗೊಂಡಿರುವುದಾಗಿ ಈ ಮೂಲಕ ತಿಳಿಯಪಡಿಸಲಾಗಿದೆ.

ಜ್ಯೋತಿ
ಕಾರ್ಯದರ್ಶಿ(ಪ್ರ)

ವಿಧಾನ ಪರಿಷತ್ತಿನ ಎಲ್ಲಾ ಮಾನ್ಯ ಶಾಸಕರುಗಳಿಗೆ